# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 192
ಸದಸ್ಯರ ಹೆಸರು : ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು .
ಉತ್ತರಿಸಬೇಕಾದ ದಿನಾಂಕ : 14-02-2023.

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಚೈಲ್ಡ್ ಲೈನ್ 1098 ಅನ್ನು ಸದ್ಯದಲ್ಲೇ ಮುಚ್ಚುವ ಹುನ್ನಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಯಾವ ಕಾರಣಕ್ಕಾಗಿ ಸರ್ಕಾರ ಈ ಚೈಲ್ಡ್ ಲೈನ್ 1098 ಅನ್ನು ಮುಚ್ಚುವ ಪ್ರಯತ್ನದಲ್ಲಿದೆ; | ಉಚಿತ ಮಕ್ಕಳ ಸಹಾಯವಾಣಿ ಸಂಖ್ಯೆ : 1098 (ಚೈಲ್ಡ್ ಲೈನ್) ರಾಷ್ಟ್ರ ವ್ಯಾಪಿ ಜಾರಿಯಲ್ಲಿರುವ ಸಂಖ್ಯೆಯಾಗಿದ್ದು, ಬಾಲ್ಯ ವಿವಾಹ, ಲೈಂಗಿಕ ದೌರ್ಜನ್ಯ, ಬಾಲ ಕಾರ್ಮಿಕತೆ, ಬೀದಿ ಬದಿ ಮಕ್ಕಳ ರಕ್ಷಣೆ ಮುಂತಾದ ಸಂಕಷ್ಟದಲ್ಲಿ ಸಿಲುಕಿರುವ ಮಕ್ಕಳ ರಕ್ಷಣೆಗಾಗಿ ಕೇಂದ್ರ ಸರ್ಕಾರದ ಸಮಗ್ರ ಮಕ್ಕಳ ರಕ್ಷಣೆ ಯೋಜನೆ ಹಾಗೂ ಪ್ರಸ್ತುತ ಜಾರಿಯಲ್ಲಿರುವ ಮಿಷನ್ ವಾತ್ಸಲ್ಯ ಯೋಜನೆಯಡಿ ಜಾರಿಗೊಳಿಸಲಾಗುತ್ತಿದೆ.<br>ಮಿಷನ್ ವಾತ್ಸಲ್ಯ ಮಾರ್ಗಸೂಚಿಯನ್ವಯ ಎಲ್ಲಾ ತುರ್ತು ಸೇವೆಗಳನ್ನು ಕೇಂದ್ರಿಕೃತಗೊಳಿಸುವ ಉದ್ದೇಶದಿಂದ ಉಚಿತ ಸಹಾಯವಾಣಿಗಳನ್ನು 112 (Emergency Response System) ಸಂಖ್ಯೆಯೊಂದಿಗೆ ವಿಲೀನಗೊಳಿಸಲಾಗುತ್ತಿದೆ. |
| ಇ) | ಮಕ್ಕಳ ರಕ್ಷಣೆಗಾಗಿ ಸ್ವಯಂಸೇವಾ ಸಂಘಟನೆಗಳೊಡನೆ ನಡೆದಿರುವ ಈ ಯಶಸ್ವೀ ಯೋಜನೆಯನ್ನು ಮುನ್ನಡೆಸಲು ಸರ್ಕಾರ ಕೈಗೊಂಡಿರುವ ಪರ್ಯಾಯ ಯೋಜನೆಗಳು ಯಾವುವು; | ರಾಜ್ಯದಲ್ಲಿ ಚೈಲ್ಡ್ ಲೈನ್ ಸಂಖ್ಯೆ: 1098 ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ಸ್ವಯಂಸೇವಾ ಸಂಘಟನೆಗಳ ಸಹಭಾಗಿತ್ವದೊಂದಿಗೆ ಪ್ರಸ್ತುತ ಜಾರಿಗೊಳಿಸಲಾಗುವ 112 ಸಂಖ್ಯೆಯಡಿ ದೊರೆಯುವ ಸೇವೆಗಳನ್ನು ಮುಂದುವರೆಸುವ ಪ್ರಸ್ತಾವನೆ ಬಗ್ಗೆ ಪರಿಶೀಲನೆಯಲ್ಲಿದೆ. |
| ಈ) | ಚೈಲ್ಡ್ ಲೈನ್ 1098 ಜೊತೆಯಲ್ಲಿ ಸುಮಾರು ಒಂದು ಸಾವಿರಕ್ಕೂ ಹೆಚ್ಚು ನುರಿತ ಮತ್ತು ತರಬೇತಿ ಹೊಂದಿದ ಸಿಬ್ಬಂದಿಗಳು ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಕೆಲಸ ಮಾಡುತ್ತಿದ್ದು, ಅವರುಗಳು ಉದ್ಯೋಗ ಕಳೆದುಕೊಳ್ಳುತ್ತಿರುವುದರಿಂದ ಅವರಿಗೆ ಸರ್ಕಾರ ಯಾವ ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸಲಿದೆ? | |

ಸಂಖ್ಯೆ: ಮಮಇ 18 ಮಭಅಬ 2023

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.